ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-ADMIOSCH/10/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001,
ದಿನಾಂಕ: 24-12-2021.

**–:: ಸುತ್ತೋಲೆ –2 ::–**

ವಿಷಯ : ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶಾತಿ ಪಡೆದು ವ್ಯಾಸಂಗ ಮಾಡುತ್ತಿರುವ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪೋತ್ಸಾಹಿಸಲು ಹೊಸ ಶಿಷ್ಯವೇತನ ಯೋಜನೆ ಜಾರಿಗೆ ತರುವ ಬಗ್ಗೆ.

ಉಲ್ಲೇಖ :
1. ಸರ್ಕಾರದ ಆದೇಶ ಸಂಖ್ಯೆ: AGRI-AML/141/2021, ದಿನಾಂಕ: 07-08-2021 ಮತ್ತು 10-12-2021.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ) ಇಲಾಖೆ, ಬೆಂಗಳೂರು ಇವರ ಅರೇ ಸರ್ಕಾರಿ ಪತ್ರ ಸಂಖ್ಯೆ: DPAR(e-Gov) 397 ACS 2021 D:22-12-2021.
3. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 22-12-2021

**-0000000-**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ 01, 02 ಮತ್ತು 03ನೇ ವರ್ಷಕ್ಕೆ ಪ್ರವೇಶಾತಿ ಪಡೆದು ವ್ಯಾಸಂಗ ಮಾಡುತ್ತಿರುವ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪೋತ್ಸಾಹಿಸಲು ಹೊಸ ಶಿಷ್ಯವೇತನ ಯೋಜನೆಯನ್ನು ಜಾರಿಗೆ ತರಲಾಗಿದ್ದು ಸದರಿ ಯೋಜನೆಯ ಲಾಭವನ್ನು ಸಂಬಂಧಪಟ್ಟ ಫಲಾನುಭವಿಗಳಿಗೆ ಮಂಜೂರು ಮಾಡಲು ಅಗತ್ಯವಿರುವ ದತ್ತಾಂಶವನ್ನು ಇಲಾಖೆಯ Admission Portal https://dtetech.karnataka.gov.in/dteone/emp/login.aspx ರಲ್ಲಿ ನಿಗಧಿತ ಅವಧಿಯೊಳಗೆ ನಮೂದಿಸಲು ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ Video Conference ಮೂಲಕ ಹಲವು ಬಾರಿ ಸೂಚನೆಗಳನ್ನು ನೀಡಿರುವುದಲ್ಲದೆ, ಉಲ್ಲೇಖ (3) ರ ಸುತ್ತೋಲೆಯಲ್ಲಿ ಪ್ರಕರಣದ ಗಂಭೀರತೆಯನ್ನು ಸಮಗ್ರವಾಗಿ ವಿವರಿಸಿ ವಿದ್ಯಾರ್ಥಿಗಳ ದತ್ತಾಂಶವನ್ನು ಎರಡು ದಿನಗಳೊಳಗಾಗಿ ನಮೂದಿಸಲು ತಿಳಿಸಲಾಗಿತ್ತು.

-2-

ಆದಾಗ್ಯು ಇದುವರೆವಿಗೂ ಹಲವು ಸಂಸ್ಥೆಗಳ ಪ್ರಾಂಶುಪಾಲರುಗಳು ತಮ್ಮ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಆಧಾರ್ ಸಂಖ್ಯೆ ಮತ್ತಿತರ ವಿವರಗಳುಳ್ಳ ಮಾಹಿತಿಯನ್ನು ಇಲಾಖೆಯ Admission Portal ನಲ್ಲಿ ನಮೂದಿಸಿರುವುದಿಲ್ಲ. ಈ ಬಗ್ಗೆ ದಿನಾಂಕ : 24-12-2021 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಇವರ ಅಧ್ಯಕ್ಷತೆಯಲ್ಲಿ ನಡೆದ ಇಲಾಖಾ ಮುಖ್ಯಸ್ಥರುಗಳು ಹಾಗೂ ವಿಶ್ವವಿದ್ಯಾಲಯಗಳ ಕುಲಸಚಿವರುಗಳ ಸಭೆಯಲ್ಲಿ ತೀವ್ರ ಆಕ್ಷೇಪವನ್ನು ವ್ಯಕ್ತಪಡಿಸಿ ಸದರಿ ಮಾಹಿತಿಯನ್ನು ದಿನಾಂಕ: 28-12-2021 ರ ಒಳಗಾಗಿ ತಪ್ಪದೇ ನಮೂದಿಸಿ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶ (SSP Portal) ದಲ್ಲಿ ಅಪ್‌ಲೋಡ್ ಮಾಡಲು ಅಂತಿಮ ಗಡುವು ನಿಗಧಿಪಡಿಸಿರುತ್ತಾರೆ. ಈ ಹಿನ್ನಲೆಯಲ್ಲಿ, ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ ಹಾಗೂ ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳು ಹಾಗೂ ಸಂಬಂಧಪಟ್ಟ ಸಿಬ್ಬಂದಿ ವರ್ಗದವರು ದಿನಾಂಕ 25-12-2021 ಮತ್ತು 26-12-2021 ಎರಡೂ ರಜೆ ದಿನಗಳಂದು ಕಾರ್ಯ ನಿರ್ವಹಿಸಿ ದಿನಾಂಕ: 27-12-2021ರೊಳಗೆ ವಿದ್ಯಾರ್ಥಿಗಳ ದತ್ತಾಂಶಗಳನ್ನು ಇಲಾಖೆಯ Admission Portal ನಲ್ಲಿ ನಮೂದಿಸಲು ಸೂಚಿಸಲಾಗಿದೆ.

ತಪ್ಪಿದ್ದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರುಗಳ ವಿರುದ್ಧ ಕೆಸಿಎಸ್ (ಸಿಸಿಎ) ನಿಯಮಗಳು, 1958 ರನ್ವಯ ಶಿಸ್ತುಕ್ರಮವನ್ನು ಕೈಗೊಳ್ಳಲಾಗುವುದು. ಮುಂದುವರೆದು ಅನುದಾನಿತ ಸಂಸ್ಥೆಗಳ ಪ್ರಕರಣಗಳಲ್ಲಿ ಮುಂದಿನ ತ್ರೈಮಾಸಿಕ ಅನುದಾನವನ್ನು ತಡೆಹಿಡಿದು, ಖಾಸಗಿ ಅನುದಾನರಹಿತ ಸಂಸ್ಥೆಗಳಿಗೆ ಸಂಬಂದಿಸಿದಂತೆ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಾನುಮೋದನೆಯನ್ನು ನೀಡಲಾಗುವುದಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

ನಿರ್ದೇಶಕರು

ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

**ಪ್ರಾಂಶುಪಾಲರು,** ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್‌ಗಳಿಗೆ.

ಪ್ರತಿ,

**ಸಂಯೋಜನಾಧಿಕಾರಿಗಳು,** ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ಇಲಾಖೆಯ ವೈಬ್‌ಸೈಟ್‌ನಲ್ಲಿ ಪ್ರಚುರ ಪಡಿಸುವುದು)